ದಿನಾಂಕ 31-8-17
ಸಂಖ್ಯೆ 7-959
ಬೆಂಗಳೂರು

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆಯನ್ನು ಜಾರಿಗೊಳಿಸುವ ಬಗ್ಗೆ.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ: ಕಾಇ 40 ಎಲ್‌ಡಬ್ಲ್ಯೂಎ 2011, ದಿನಾಂಕ: 12-01-2012.

2) ಸರ್ಕಾರದ ಆದೇಶ ಸಂಖ್ಯೆ: ಕಾಇ 269 ಎಲ್‌ಇಟಿ 2016, ದಿನಾಂಕ: 13-10-2016.

ಪ್ರಸ್ತಾವನೆ:

ಮೇಲೆ ಕ್ರಮಸಂಖ್ಯೆ (1)ರಲ್ಲಿ ಓದಲಾದ ಸರ್ಕಾರಿ ಆದೇಶದನ್ವಯ, ಖಾಸಗಿ ವಾಣಿಜ್ಯ ವಾಹನಗಳಾದ ಖಾಸಗಿ ಆಟೋ, ಟ್ಯಾಕ್ಸಿ, ಮ್ಯಾಕ್ಸಿ ಕ್ಯಾಬ್, ಲಾರಿ ಹಾಗೂ ಬಸ್ ಚಾಲಕರುಗಳಿಗೆ ಅಪಘಾತ ವಿಮಾ ಪರಿಹಾರ ಸೌಲಭ್ಯವನ್ನು ಒದಗಿಸಲು **" ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ವಾಹನ ಚಾಲಕರ ಅಪಘಾತ ಪರಿಹಾರ ಯೋಜನೆ"** ಯನ್ನು ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ ಮೂಲಕ ಜಾರಿಗೊಳಿಸಲಾಗುತ್ತಿದೆ.

ಮೇಲೆ ಕ್ರಮಸಂಖ್ಯೆ (2)ರಲ್ಲಿ ಓದಲಾದ ಸರ್ಕಾರಿ ಆದೇಶದನ್ವಯ "ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ವಾಹನ ಚಾಲಕರ ಅಪಘಾತ ಪರಿಹಾರ ಯೋಜನೆ" ಯನ್ನು ಪರಿಷ್ಕರಿಸಿ ಕರ್ನಾಟಕ ರಾಜ್ಯದಲ್ಲಿ ಊರ್ಜಿತ ಚಾಲನಾ ಪರವಾನಗಿ ಪಡೆದ ಖಾಸಗಿ ವಾಣಿಜ್ಯ ವಾಹನಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಚಾಲಕರು, ನಿರ್ವಾಹಕರು ಹಾಗೂ ಕ್ಲೀನರ್‌ಗಳಿಗೆ ಅಪಘಾತ ವಿಮಾ ಪರಿಹಾರ ಸೌಲಭ್ಯವನ್ನು ಕಲ್ಪಿಸಲು **"ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ"** ಯನ್ನು ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ ಮೂಲಕ ಜಾರಿಗೊಳಿಸಲು ತೀರ್ಮಾನಿಸಿರುವಂತೆ ಪರಿಷ್ಕೃತ ಸದರಿ ಯೋಜನೆಯಡಿ ಫಲಾನುಭವಿಯು ಗರಿಷ್ಠ ರೂ.2.00 ಲಕ್ಷಗಳ ಪರಿಹಾರ ಪಡೆಯಲು ಅರ್ಹನಾಗಿರುತ್ತಾನೆ.

ಈ ಯೋಜನೆಯಡಿ ಒಳಗೊಳ್ಳುವ ಫಲಾನುಭವಿಗಳಲ್ಲಿ ಹೆಚ್ಚಿನವರು ಆರ್ಥಿಕವಾಗಿ ತುಂಬಾ ದುರ್ಬಲ ವರ್ಗದವರಾಗಿದ್ದು, ಅಂತಹವರ ಪೈಕಿ ಮರಣ ಹೊಂದಿದಲ್ಲಿ ಅವರ ಕುಟುಂಬದಲ್ಲಿನ ಅವಲಂಬಿತರು ತಮ್ಮ ಕುಟುಂಬಗಳ ಜೀವನ ನಿರ್ವಹಣೆಗೆ ಆರ್ಥಿಕ ಸಂಕಷ್ಟವನ್ನು ಎದುರಿಸಬೇಕಾದ ಸಂದರ್ಭ ಒದಗಿಬರುತ್ತದೆ. ಅಪಘಾತದಿಂದಾದ ಮರಣ ಹೊಂದಿದ ಪ್ರಕರಣಗಳಲ್ಲಿ ಈ ಯೋಜನೆಯಡಿ ಈಗಾಗಲೇ ನಿಗದಿಪಡಿಸಿರುವ ಪರಿಹಾರದ ಮೊತ್ತವು ಬದಲಾದ ಸನ್ನಿವೇಶದಲ್ಲಿ ದೀರ್ಘಕಾಲ ಕುಟುಂಬ ನಿರ್ವಹಣೆಗೆ ಅನುಕೂಲಕರವಾಗಿರುವುದಿಲ್ಲ.

ಈ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆಯಡಿ ಫಲಾನುಭವಿಯು ಅಪಘಾತದಿಂದ ಮರಣ ಸಂಭವಿಸಿದ ಪ್ರಕರಣಗಳಲ್ಲಿ ನೀಡಬೇಕಾದ ಸೌಲಭ್ಯವನ್ನು ಈಗಿರುವ ಗರಿಷ್ಠ ರೂ.2.00 ಲಕ್ಷಗಳಿಂದ ರೂ.5.00 ಲಕ್ಷಗಳಿಗೆ ಹೆಚ್ಚಿಸಿ ಪರಿಷ್ಕರಿಸುವ ಅಗತ್ಯತೆ ಇರುತ್ತದೆ. ಆದ್ದರಿಂದ ಈ ಕೆಳಗಿನ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕಾಇ 267 ಎಲ್‌ಇಟಿ 2017, ಬೆಂಗಳೂರು, ದಿನಾಂಕ: 23.08.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆಯಡಿ ಫಲಾನುಭವಿಗಳಾದ ಖಾಸಗಿ ವಾಣಿಜ್ಯ ವಾಹನ ಚಾಲಕರು, ನಿರ್ವಾಹಕರು ಹಾಗೂ ಕ್ಲೀನರ್‌ಗಳಿಗೆ ಅಪಘಾತ ಪರಿಹಾರ ಸೌಲಭ್ಯವನ್ನು ಈ ಕೆಳಕಂಡಂತೆ ಪರಿಷ್ಕರಿಸಲು ಆದೇಶಿಸಿದೆ.

---

" ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆಗೆ ಸಂಬಂಧಿಸಿದ ಸರ್ಕಾರದ ಆದೇಶ ಸಂಖ್ಯೆ ಕಾಇ 269 ಎಲ್ಇಟಿ 2016 ದಿನಾಂಕ: 13/10/2016ರ ಆದೇಶದ ಅನುಬಂಧದ ಕಂಡಿಕೆ(9) ಯೋಜನೆಯ ಸೌಲಭ್ಯಗಳು" ಶೀರ್ಷಿಕೆಯನ್ನು ಕೆಳಗೆ ಪರಿಷ್ಕರಿಸಿದಂತೆ ಓದಿಕೊಳ್ಳುವುದು:-

**"ಯೋಜನೆಯಡಿ ನೋಂದಾಯಿತ ಫಲಾನುಭವಿಯು ಈ ಕೆಳಕಂಡ ಸೌಲಭ್ಯಗಳಿಗೆ ಅರ್ಹನಾಗುತ್ತಾನೆ. ಅಪಘಾತ ಮರಣ ಪರಿಹಾರವನ್ನು ರೂ.2.00 ಲಕ್ಷಗಳಿಂದ ರೂ.5.00 ಲಕ್ಷಗಳಿಗೆ ಪರಿಷ್ಕರಿಸಿ ಹೆಚ್ಚಿಸಲಾಗಿದೆ".** ಇದನ್ನು ಹೊರತುಪಡಿಸಿ ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆಯಲ್ಲಿ ಉಳಿದಂತೆ ಯಾವುದೇ ಬದಲಾವಣೆ ಇರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಜಿ.ಎಂ. ಸಿದ್ದರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಾರ್ಮಿಕ ಇಲಾಖೆ.

23-8-2017

ಇವರಿಗೆ:

1. ಮಹಾಲೇಖಪಾಲರು, ಲೆಕ್ಕಪತ್ರ/ಲೆಕ್ಕಪರಿಶೋಧನೆ, ಕರ್ನಾಟಕ, ಬೆಂಗಳೂರು.
2. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರಿಗೆ, ವಿಧಾನಸೌಧ, ಬೆಂಗಳೂರು.
3. ಮಾನ್ಯ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿಯವರಿಗೆ, ವಿಧಾನಸೌಧ, ಬೆಂಗಳೂರು.
4. ಕಾರ್ಮಿಕ ಆಯುಕ್ತರು, ಕಾರ್ಮಿಕ ಇಲಾಖೆ, ಕಾರ್ಮಿಕ ಭವನ, ಬೆಂಗಳೂರು.
5. ಜಂಟಿ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ, ಬೆಂಗಳೂರು (ಕಾರ್ಮಿಕ ಆಯುಕ್ತರ ಮುಖಾಂತರ)
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3&9).
7. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಗೋಪುರ, ಬೆಂಗಳೂರು.
8. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
9. ಮಾನ್ಯ ಕಾರ್ಮಿಕ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
10. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕಾರ್ಮಿಕ ಇಲಾಖೆ.
11. ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕಾರ್ಮಿಕ ಇಲಾಖೆ.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.